ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಸಾರಿಗೆ ಇಲಾಖೆಗೆ ಈ ಹಿಂದೆ ಘೋಷಿಸಿರುವ ಆಯವ್ಯಯದ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):-

300 (324) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಪ್ರಾದೇಶಿಕ ಸಾರಿಗೆ ಇಲಾಖೆಗಳ ವ್ಯಾಪ್ತಿಯಲ್ಲಿ ಈ ಹಿಂದೆ ಆಯವ್ಯಯದಲ್ಲಿ ಘೋಷಿಸಲಾದ ಯೋಜನೆಗಳನ್ನು ಇನ್ನೂ ಅನುಷ್ಠಾನಗೊಳಿಸದಿರಲು ಕಾರಣವೇನು; (ವಿವರ ನೀಡುವುದು)

(ಆ) ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆಯಿಂದ "ಏಜೆಂಟರ್ಗಳೇ" ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಸಾರಿಗೆ ಇಲಾಖೆಯಿಂದ ವಾರ್ಷಿಕ ಸರ್ಕಾರಕ್ಕೆ ಬರುವ ಆದಾಯವೆಷ್ಟು; (ವಿವರ ಒದಗಿಸುವುದು)

(ಈ) ಮಂಗಳೂರು ನಗರದಲ್ಲಿರುವ ಪ್ರಾದೇಶಿಕ ಸಾರಿಗೆ ಅಧಿಕಾರಿಯವರ ಕಛೇರಿ ಮತ್ತು ಇತರ ಕಛೇರಿಗಳನ್ನು ನಗರದ ಹೊರವಲಯಕ್ಕೆ ಸ್ಥಳಾಂತರಿಸಲು ನಿರ್ಣಯಿಸಲಾಗಿದ್ದರೂ ಕ್ರಮ ಕೈಗೊಳ್ಳದೇ ಇರಲು ಕಾರಣವೇನು? (ವಿವರ ಒದಗಿಸುವುದು)